ಓ.ಎಸ್. ನಂ. 55/2018

ಪಿ.ಡಬ್ಲ್ಯು: 02 (ರೇವಣಸಿದ್ದಪ್ಪ)

ದಿನಾಂಕಃ 24.11.2023 ರಂದು ಮುಖ್ಯ ವಿಚಾರಣೆಗೆ ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆ ಶ್ರೀ NP ವಕೀಲರಿಂದಃ

ಸಾಕ್ಷ್ಯ ರೂಪದಲ್ಲಿ ಹಾಜರು ಪಡಿಸಿರುವ ನನ್ನ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಮತ್ತು ಅದನ್ನು ತಿಳಿದುಕೊಂಡು ನಾನು ನನ್ನ ಸಹಿ ಮಾಡಿದ್ದೇನೆ.

ಮಾನ್ಯ ನ್ಯಾಯಾಲಯಕ್ಕೆ ಹಾಜರುಪಡಿಸಿದ ದಾಖಲೆಗಳ ವಿವರ ಈ ಕೆಳಗಿನಂತಿವೆ:

1. ಸಾಕ್ಷಿ ನಿಪಿ 1 ರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಸಾಕ್ಷಿ ಸಹಿಯನ್ನು ನಿಪಿ 1 ಎ ಎಂದು ಗುರುತಿಸಲಾಯಿತು. ಅದರಲ್ಲಿ 1 ನೇ ಪ್ರತಿವಾದಿಯ ಮಗ ಕರಿಬಸಪ್ಪನ ಸಹಿ ಇದ್ದು ಅದನ್ನು ನಾನು ನೋಡಿ ಗುರುತಿಸಿದ್ದು ಅದನ್ನು ನಿಪಿ 1 ಬಿ ಎಂದು ಗುರುತಿಸಲಾಯಿತು. ಸದರಿ ದಾಖಲಾತಿಗೆ ಮತ್ತೊಬ್ಬ ಸಾಕ್ಷಿ ಜಗದೀಶ ಸಹಿ ಮಾಡಿದ್ದು ಅದನ್ನು ನಾನು ನೋಡಿ ಗುರುತಿಸಿದ್ದು ಅದನ್ನು ನಿಪಿ 1 ಸಿ ಎಂದು ಗುರುತಿಸಲಾಯಿತು.

ಮುಖ್ಯ ವಿಚಾರಣೆಃ ಮುಕ್ತಾಯ.

ಪ್ರತಿವಾದಿ ಪರ ವಕೀಲರ ಕೋರಿಕೆಯ ಮೇರೆಗೆ ಪಾಟೀ ಸವಾಲಿಗೆ ಸಮಯಾವಕಾಶ ನೀಡಲಾಯಿತು.

(ಮೇಲ್ಕಂಡ ಸಾಕ್ಷ್ಯವನ್ನು ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ.)

ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ.

ಕೂಡ್ಲಿಗಿ.